ಪ್ರಜಾವಾಣಿ
ಕರ್ನಾಟಕದ ಅತ್ಯಂತ ವಿಶ್ವಾಸಾರ್ಹ ಸುದ್ದಿ ಮಾಧ್ಯಮ

**Sunday 26th September 2021, Page No.004**

## UPSC Result Announced: RVCE Srinivas M P, G. Mamtha and R Yatish Topers

4 Prajavani - 26/9/21

# ಅಮೆರಿಕಾದಿಂದ ವಾಪಸ್ಸಾದ ಟೆಕ್ಕಿಗೆ 235ನೇ ರ‍್ಯಾಂಕ್


ಶ್ರೀನಿವಾಸ್ ಎಂ.ಪಿ.

ದಾವಣಗೆರೆ: ಅಮೆರಿಕಾದಲ್ಲಿ ಸಾಫ್ಟ್‌ವೇರ್ ಎಂಜಿನಿಯರ್ ಆಗಿದ್ದ ಮಲೇಬೆನ್ನೂರು ಮೂಲದ ಶ್ರೀನಿವಾಸ್ ಎಂ.ಪಿ. ಅವರು ಯುಪಿಎಸ್‌ಸಿ ಪರೀಕ್ಷೆಯಲ್ಲಿ 235ನೇ ರ‍್ಯಾಂಕ್ ಪಡೆದಿದ್ದಾರೆ.

ಬೆಂಗಳೂರಿನ ಆರ್.ವಿ. ಕಾಲೇಜಿನಲ್ಲಿ ಎಂಜಿನಿಯರಿಂಗ್ ಮುಗಿಸಿ ಸಿಯಾಟಲ್‌ನ ವಾಷಿಂಗ್ಟನ್ ಯೂನಿವರ್ಸಿಟಿಯಲ್ಲಿ ಸ್ನಾತಕೋತ್ತರ ಪದವಿ ಪಡೆದರು. ಕೆಲ ವರ್ಷಗಳ ಕಾಲ ಅಲ್ಲಿನ ರಸೆಲ್ ಇನ್‌ವೆಸ್ಟ್‌ಮೆಂಟ್‌ನಲ್ಲಿ ಕರ್ತವ್ಯ ನಿರ್ವಹಿಸಿ ಹುಬ್ಬಳ್ಳಿಯಲ್ಲಿ ನೆಲೆಸಿ 5ನೇ ಪ್ರಯತ್ನದಲ್ಲಿ ಯಶಸ್ಸು ಸಾಧಿಸಿದ್ದಾರೆ.

'ಪ್ರಜಾವಾಣಿ' ಅಚ್ಚುಮೆಚ್ಚು: 'ನಾನು ಮೊದಲಿನಿಂದಲೂ 'ಪ್ರಜಾವಾಣಿ' ಹಾಗೂ 'ಡೆಕ್ಕನ್ ಹೆರಾಲ್ಡ್' ಪತ್ರಿಕೆ ಓದುತ್ತಿದ್ದೇನೆ. ಸಾಹಿತ್ಯ ಪುರವಣಿಯಲ್ಲಿನ ಅನೇಕ ವಿಷಯಗಳು ಪರೀಕ್ಷೆಯಲ್ಲಿ ಅನುಕೂಲಕ್ಕೆ ಬಂದವು. ಸಂಪಾದಕೀಯ ಪುಟದಲ್ಲಿನ ಎಲ್ಲಾ ವಿಷಯಗಳನ್ನು ಅಭ್ಯಸಿಸಿದ್ದೇನೆ' ಎಂದು ಶ್ರೀನಿವಾಸ್ ಮೆಚ್ಚುಗೆ ವ್ಯಕ್ತಪಡಿಸಿದರು. ಸದ್ಯ ಅವರು ಹುಬ್ಬಳ್ಳಿಯಲ್ಲಿ ತಂದೆಯ ಜೊತೆಗೆ ನೆಲೆಸಿದ್ದಾರೆ.

## ಮಮತಾಗೆ 707ನೇ ರ‍್ಯಾಂಕ್

ಹೊಸದುರ್ಗ: ತಾಲ್ಲೂಕಿನ ದೇವಪುರ ಭೋವಿಹಟ್ಟಿ ಗ್ರಾಮದ ಗೋವಿಂದಪ್ಪ ಚಂದ್ರಮ್ಮ ಅವರ ಪುತ್ರಿ ಜಿ. ಮಮತಾ ಈ ಬಾರಿ ಯುಪಿಎಸ್‌ಸಿ ಪರೀಕ್ಷೆಯಲ್ಲಿ 707ನೇ ರ‍್ಯಾಂಕ್ ಪಡೆದಿದ್ದಾರೆ.

ಈ ಗ್ರಾಮಕ್ಕೆ ಇಂದಿಗೂ ಸಾರಿಗೆ ಸೌಲಭ್ಯವಿಲ್ಲ. ಬೆಂಗಳೂರಿನ ಆರ್.ವಿ. ಎಂಜಿನಿಯರಿಂಗ್ ಕಾಲೇಜಿನಲ್ಲಿ ಸಿವಿಲ್ ಎಂಜಿನಿಯರಿಂಗ್ ಪದವಿ ಪಡೆದಿರುವ ಇವರು ಬೆಂಗಳೂರಿನಲ್ಲಿ ಇದ್ದುಕೊಂಡೇ ಯುಪಿಎಸ್‌ಸಿ ಪರೀಕ್ಷೆಗೆ 10 ತಿಂಗಳು ತರಬೇತಿ ಪಡೆದು ಯಶಸ್ಸು ಕಂಡಿದ್ದಾರೆ.


ಜಿ. ಮಮತಾ

## 'ನನಗೆ ಅಣ್ಣನೇ ಮಾರ್ಗದರ್ಶಕ'



ಬೀದರ್: 'ಅಣ್ಣ ಐಪಿಎಸ್ ಅಧಿಕಾರಿ ಫೈಜಾನ್ ಅಹಮ್ಮದ್ ಅವರ ಮಾರ್ಗದರ್ಶನದಲ್ಲಿ ಯುಪಿಎಸ್‌ಸಿ ಪರೀಕ್ಷೆ ಬರೆದು ಪಾಸಾದ ಖುಷಿ ನನಗಿದೆ. 2018ರಲ್ಲಿ ಬೆಂಗಳೂರಿನ ರಾಮಯ್ಯ ಎಂಜಿನಿಯರಿಂಗ್ ಕಾಲೇಜಿನಿಂದ ಪದವಿ ಪಡೆದು 2019ರಲ್ಲಿ ಯುಪಿಎಸ್‌ಸಿ ಪರೀಕ್ಷೆ ಬರೆದಿದ್ದೆ. ಮೊದಲ ಪ್ರಯತ್ನದಲ್ಲಿ ಯಶ ದೊರಕದಿದ್ದರೂ ಸಾಕಷ್ಟು ಅನುಭವ ಲಭಿಸಿತು. ಎರಡನೇ ಪ್ರಯತ್ನದಲ್ಲಿ ಯಶಸ್ಸು ದೊರೆಯಿತು. ಪೋಷಕರ ಬೆಂಬಲದಿಂದಲೇ ಯಶಸ್ಸು ಸಾಧಿಸಲು ಸಾಧ್ಯವಾಗಿದೆ' ಎಂದು ಯುಪಿಎಸ್‌ಸಿ ಪರೀಕ್ಷೆಯಲ್ಲಿ 270ನೇ ರ‍್ಯಾಂಕ್ ಪಡೆದ ಮಹಮ್ಮದ್ ಹಾರಿಸ್ ಸುಮ್ಮೈರ್ ಹೇಳುತ್ತಾರೆ.

# 115ನೇ ರ್‍ಯಾಂಕ್ ಪಡೆದ ಯತೀಶ್



ರಾಮನಗರ: ಕನಕಪುರದವರಾದ ಆರ್. ಯತೀಶ್ ಈ ಬಾರಿಯ ಯುಪಿಎಸ್‌ಸಿ ಪರೀಕ್ಷೆಯಲ್ಲಿ 115ನೇ ರ್‍ಯಾಂಕ್ ಪಡೆದಿದ್ದು, ರ್‍ಯಾಂಕ್ ಪಟ್ಟಿಯಲ್ಲಿ ರಾಜ್ಯಕ್ಕೆ ಎರಡನೇ ಸ್ಥಾನವನ್ನು ತಮ್ಮದಾಗಿಸಿಕೊಂಡಿದ್ದಾರೆ.

ಯತೀಶ್ 2017ರಿಂದ ಯುಪಿಎಸ್‌ಸಿ ಪರೀಕ್ಷೆ ಬರೆಯುತ್ತಿದ್ದು, 2019ರಲ್ಲಿ ತಮ್ಮ ಎರಡನೇ ಪ್ರಯತ್ನದಲ್ಲಿ ಐಪಿಎಸ್ ಹುದ್ದೆಗಳಿಸಿ ಅಸ್ಸಾಂ-ಮೇಘಾಲಯ ಕೇಡಾರ್ ಅಧಿಕಾರಿಯಾಗಿ ನೇಮಕಗೊಂಡಿದ್ದರು. ನಂತರ ಕರ್ತವ್ಯದಿಂದ ರಜೆ ಪಡೆದು, ಮೂರನೇ ಪ್ರಯತ್ನದಲ್ಲಿ ಐಎಎಸ್ ಅಧಿಕಾರಿಯಾಗುವ ಕನಸು ನನಸು ಮಾಡಿಕೊಂಡಿದ್ದಾರೆ.

ಕನಕಪುರದಲ್ಲಿ ಪ್ರಾಥಮಿಕ ಶಿಕ್ಷಣ ಮುಗಿಸಿ, ಮುಂದಿನ ಓದಿಗಾಗಿ ಬೆಂಗಳೂರಿನತ್ತ ಮುಖ ಮಾಡಿದರು. ಆರ್.ವಿ. ಎಂಜಿನಿಯರಿಂಗ್ ಕಾಲೇಜಿನಲ್ಲಿ ಎಲೆಕ್ಟ್ರಾನಿಕ್ ಮತ್ತು ಕಮ್ಯುನಿಕೇಶನ್ ವಿಭಾಗದಲ್ಲಿ ಪದವಿ ಪಡೆದಿದ್ದಾರೆ. ಅವರ ತಂದೆ ರಾಧಾಕೃಷ್ಣ ನಿವೃತ್ತ ಅಧಿಕಾರಿ ಹಾಗೂ ತಾಯಿ ರಜನಿ ಗೃಹಿಣಿ. 'ರ್‍ಯಾಂಕ್ ಆಧಾರದ ಮೇಲೆ ಈ ಬಾರಿ ಐಎಎಸ್ ಅಧಿಕಾರಿಯಾಗಿ ಆಯ್ಕೆ ಆಗುವ ಸಾಧ್ಯತೆ ಇದ್ದು, ಕರ್ನಾಟಕದಲ್ಲೇ ಸೇವೆ ಸಲ್ಲಿಸುವ ಹಂಬಲ ಇದೆ' ಎಂದರು.